ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ರಂಗಮಂದಿರ ಮತ್ತು ಸಾಂಸ್ಕೃತಿಕ ಭವನ ನಿರ್ಮಾಣ

ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

603 (787) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಲ್ಲಿ ಕಳೆದ 3 ವರ್ಷಗಳಿಂದ ವಿವಿಧ ಯೋಜನೆಗಳಿಗೆ ಬಿಡುಗಡೆ ಮಾಡಿದ ಅನುದಾನವೆಷ್ಟು; ಇದರಲ್ಲಿ ಖರ್ಚಾಗಿರುವುದೆಷ್ಟು; ಖರ್ಚಾಗದೆ ಉಳಿದಿರುವುದೆಷ್ಟು;

(ಆ) ಇಲಾಖೆಯಿಂದ ರಾಜ್ಯದಲ್ಲಿ ಎಷ್ಟು ರಂಗಮಂದಿರ ಮತ್ತು ಸಂಸ್ಕೃತಿ ಭವನಗಳನ್ನು ನಿರ್ಮಾಣ ಮಾಡಲಾಗಿದೆ; ಕಳೆದ 3 ವರ್ಷಗಳ ಜಿಲ್ಲಾವಾರು ಮಾಹಿತಿ ನೀಡುವುದು ;

(ಇ) ಪ್ರಸ್ತುತ ಸಾಲಿನಲ್ಲಿ ಎಷ್ಟು ಇಂಥ ಕಟ್ಟಡಗಳನ್ನು ನಿರ್ಮಿಸಲು ಪ್ರಸ್ತಾವನೆ ಸಲ್ಲಿಸಲಾಗಿದೆ?